# ಮೇಲ್ಮನೆ ಸದಸ್ಯರಾಗಿ ಬಿಜೆಪಿಯ ಮುನಿರಾಜು ಅವಿರೋಧ ಆಯ್ಕೆ



ವಿಧಾನ ಪರಿಷತ್‌ಗೆ ಅವಿರೋಧವಾಗಿ ಆಯ್ಕೆಯಾದ ಮುನಿರಾಜುಗೌಡ ಅವರಿಗೆ ವಿಧಾಸಭಾ ಕಾರ್ಯದರ್ಶಿ ವಿಶಾಲಾಕ್ಷಿ ಅವರು ಆಯ್ಕೆ ಪತ್ರವನ್ನು ನೀಡಿದರು. ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಎನ್.ರವಿಕುಮಾರ್ ಇದ್ದರು.

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿಧಾನಪರಿಷತ್ತಿನ ಒಂದು ಸ್ಥಾನಕ್ಕಾಗಿ ನಡೆದ ಚುನಾವಣೆಯಲ್ಲಿ ಆಡಳಿತಾರೂಢ ಬಿಜೆಪಿಯ ತುಳಸಿ ಮುನಿರಾಜು ಗೌಡ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬಿಜೆಪಿಯಿಂದ ಒಬ್ಬ ಅಭ್ಯರ್ಥಿ ಬಿಟ್ಟು ಬೇರಿನ್ಯಾರೂ ಸ್ಪರ್ಧೆಗೆ ಮುಂದೆ ಬಾರದ ಹಿನ್ನೆಲೆಯಲ್ಲಿ ಸೋಮವಾರ ನಾಮಪತ್ರ ಸಲ್ಲಿಕೆಯ ಅವಧಿ ಮುಗಿದ ಬಳಿಕ ಚುನಾವಣಾಧಿಕಾರಿಯೂ ಆಗಿರುವ ವಿಧಾನಸಭೆ ಕಾರ್ಯದರ್ಶಿ ವಿಶಾಲಾಕ್ಷಿ ಅವರು ಮುನಿರಾಜು ಗೌಡರಿಗೆ ಅಧಿಕೃತವಾಗಿ ಆಯ್ಕೆ ಪತ್ರ ನೀಡಿದರು. ಈ ವೇಳೆ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಎನ್. ರವಿಕುಮಾರ್ ಅವರೂ ಇದ್ದರು.

ಉಪಸಭಾಪತಿಯೂ ಆಗಿದ್ದ ಜೆಡಿಎಸ್‌ನ ಎಸ್.ಎಲ್.ಧರ್ಮೇಗೌಡರ ಅಕಾಲಿಕ ನಿಧನದಿಂದ ತೆರವಾಗಿದ್ದ ಒಂದು ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಪ್ರತಿಪಕ್ಷಗಳಾದ ಕಾಂಗ್ರೆಸ್ ಮತ್ತು ಜೆಡಿಎಸ್‌ನಿಂದ ಯಾರೊಬ್ಬರೂ ನಾಮಪತ್ರ ಸಲ್ಲಿಸಿರಲಿಲ್ಲ. ಹೀಗಾಗಿ, ಮುನಿರಾಜುಗೌಡ ಅವಿರೋಧವಾಗಿ ಚುನಾಯಿತರಾದರು.